**Akashvani : Bangalore**
**National Bulletin In Kannada**
**02.08.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.08.2024 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ನವದೆಹಲಿಯಲ್ಲಿಂದು ಎರಡು ದಿನಗಳ ರಾಜ್ಯಪಾಲರ ಸಮ್ಮೇಳನ ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು**

**೨. ವಯನಾಡು ಭೂಕುಸಿತದಲ್ಲಿ ೩೦೦ ದಾಟಿದ ಮೃತರ ಸಂಖ್ಯೆ, ಕನಿಷ್ಠ ೨೦೦ ಮಂದಿ ನಾಪತ್ತೆ; ಸಂತ್ರಸ್ತರಿಗೆ ಕಾಂಗ್ರೆಸ್‌ನಿಂದ ನೂರು ಮನೆಗಳನ್ನು ನಿರ್ಮಿಸಿಕೊಡುವುದಾಗಿ ರಾಹುಲ್ ಗಾಂಧಿ ಭರವಸೆ**

**೩. ನೀಟ್ ಪರೀಕ್ಷೆಯಲ್ಲಿನ ಲೋಪ-ದೋಷ ಅಮೂಲಾಗ್ರವಾಗಿ ಸರಿಪಡಿಸುವಂತೆ ತಜ್ಞರ ಸಮಿತಿಗೆ ಸುಪ್ರೀಂಕೋರ್ಟ್ ಸೂಚನೆ**

**೪. ಏಕದಿನ ಕ್ರಿಕೆಟ್; ಭಾರತಕ್ಕೆ ೨೩೧ ರನ್‌ಗಳ ಗುರಿ ನೀಡಿದ ಶ್ರೀಲಂಕಾ**

**೫. ಪ್ಯಾರಿಸ್ ಒಲಿಂಪಿಕ್ಸ್; ೨೫ ಮೀಟರ್ ಶೂಟಿಂಗ್ ಸ್ಪರ್ಧೆಯಲ್ಲಿ ಅಂತಿಮ ಸುತ್ತು ಪ್ರವೇಶಿಸಿದ ಎರಡು ಕಂಚಿನ ಪದಕ ವಿಜೇತೆ ಮನು ಭಾಕರ್**

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನವದೆಹಲಿಯ ರಾಷ್ಟ್ರಪತಿ ಭವನದಲ್ಲಿಂದು ಎರಡು ದಿನಗಳ ರಾಜ್ಯಪಾಲರ ಸಮ್ಮೇಳನವನ್ನು ಉದ್ಘಾಟಿಸಿದರು. ಸಮ್ಮೇಳನ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ಕ್ರಿಮಿನಲ್ ಅಪರಾಧಕ್ಕೆ ಸಂಬಂಧಿಸಿದಂತೆ ಮೂರು ಹೊಸ ಕಾನೂನುಗಳನ್ನು ಜಾರಿಗೆ ತರುವುದರೊಂದಿಗೆ ದೇಶದಲ್ಲಿ ನ್ಯಾಯ ವ್ಯವಸ್ಥೆಯ ಹೊಸ ಯುಗ ಪ್ರಾರಂಭವಾಗಿದೆ. ಭಾರತೀಯ ನ್ಯಾಯ ಸಂಹಿತಾ, ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ ಮತ್ತು ಭಾರತೀಯ ಸಾಕ್ಷಿ ಅಧಿನಿಯಮ ಎಂಬ ಕಾನೂನುಗಳು, ಜನರ ಚಿಂತನೆಯಲ್ಲಿನ ಬದಲಾವಣೆಗೆ ಸಾಕ್ಷ್ಯಯಾಗಿದೆ ಎಂದು ಹೇಳಿದರು. ಪ್ರಜಾಪ್ರಭುತ್ವದ ಸುಗಮ ಕಾರ್ಯನಿರ್ವಹಣೆಗಾಗಿ, ವಿವಿಧ ಕೇಂದ್ರೀಯ ಸಂಸ್ಥೆಗಳು ಎಲ್ಲಾ ರಾಜ್ಯಗಳೊಂದಿಗೆ ಉತ್ತಮ ಸಮನ್ವಯದೊಂದಿಗೆ ಕೆಲಸ ಮಾಡುವುದು ನಿರ್ಣಾಯಕವಾಗಿದೆ. ಈ ಸಮನ್ವಯವನ್ನು ಹೇಗೆ ಉತ್ತೇಜಿಸಬಹುದು ಎಂಬುದರ ಕುರಿತು ಯೋಚಿಸುವಂತೆ ಅವರು ರಾಜ್ಯಪಾಲರಿಗೆ ಸಲಹೆ ನೀಡಿದರು. ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಉಪರಾಷ್ಟ್ರಪತಿ ಜಗದೀಪ್ ಧನಕರ್, ಕಳೆದ ದಶಕದಲ್ಲಿ ನಡೆದ ಸಮಾಜ ಕಲ್ಯಾಣ ಯೋಜನೆಗಳು ಮತ್ತು ಅಭಿವೃದ್ಧಿಯ ಬಗ್ಗೆ ಜನರಿಗೆ ಅರಿವು ಮೂಡಿಸುವ ತಮ್ಮ ಸಾಂವಿಧಾನಿಕ ಜವಾಬ್ದಾರಿಯನ್ನು ನಿರ್ವಹಿಸುವಂತೆ ರಾಜ್ಯಪಾಲರಿಗೆ ಸಲಹೆ ನೀಡಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಮಾತನಾಡಿ, ಕೇಂದ್ರ ಮತ್ತು ರಾಜ್ಯದ ನಡುವೆ ಪರಿಣಾಮಕಾರಿ ಸೇತುವೆಯ ಪಾತ್ರವನ್ನು ರಾಜ್ಯಪಾಲರು ವಹಿಸಬೇಕು. ರಾಜ್ಯಪಾಲರ ಹುದ್ದೆಯು ಸಂವಿಧಾನದ ಚೌಕಟ್ಟಿನೊಳಗೆ ರಾಜ್ಯದ ಜನರ ಕಲ್ಯಾಣದಲ್ಲಿ ಅದರಲ್ಲೂ ಮುಖ್ಯವಾಗಿ ಬುಡಕಟ್ಟು ಪ್ರದೇಶಗಳಿಗೆ ಸಂಬಂಧಿಸಿದಂತೆ ನಿರ್ಣಾಯಕ ಪಾತ್ರವನ್ನು ವಹಿಸುವ ಪ್ರಮುಖ ಸಂಸ್ಥೆಯಾಗಿದೆ ಎಂದು ಹೇಳಿದರು.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಇದೇ ತಿಂಗಳ ೫ರಿಂದ ೧೦ ರವರೆಗೆ ಫಿಜಿ, ನ್ಯೂಜಿಲ್ಯಾಂಡ್ ಮತ್ತು  ತಿಮೋರ್ ಲೆಸ್ತೆ ದೇಶಗಳಿಗೆ ಪ್ರವಾಸ ಕೈಗೊಳ್ಳಲಿದ್ದಾರೆ.  ಜಿ ಮತ್ತು ತಿಮೋರ್ ಲೆಸ್ತೆ ದೇಶಗಳಿಗೆ ಭಾರತದ ರಾಷ್ಟ್ರಪತಿಗಳು ನೀಡುತ್ತಿರುವ ಮೊದಲ ಭೇಟಿ ಇದಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ರಾಷ್ಟ್ರಪತಿಗಳು ಆಗಸ್ಟ್ ೫ ರಿಂದ ೭ ರವರೆಗೆ ಫಿಜಿಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು ಫಿಜಿ ಅಧ್ಯಕ್ಷ ಕಟೋನಿವೆರೆ ಮತ್ತು ಪ್ರಧಾನಮಂತ್ರಿ ಸಿತಿವೇನಿ ರಬುಕಾ ಅವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಆಗಸ್ಟ್ ೮ ಮತ್ತು ೯ ರಂದು ನ್ಯೂಜಿಲೆಂಡ್‌ಗೆ ಭೇಟಿ ನೀಡಲಿರುವ ರಾಷ್ಟ್ರಪತಿಗಳು, ಗವರ್ನರ್ ಜನರಲ್ ಸಿಂಡಿ ಕಿರೊ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ ಮತ್ತು ಪ್ರಧಾನಿ ಕ್ರಿಸ್ಟೋಫರ್ ಲುಕ್ಸನ್ ಅವರನ್ನು ಭೇಟಿಯಾಗಲಿದ್ದಾರೆ. ಆಗಸ್ಟ್ ೧೦ ರಂದು ಟಿಮೋರ್-ಲೆಸ್ತೆಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು ಅಧ್ಯಕ್ಷ ಜೋಸ್ ರಾಮೋಸ್-ಹೊರ್ಟಾ ಅವರೊಂದಿಗೆ ದ್ವಿಪಕ್ಷೀಯ ಸಭೆಯನ್ನು ನಡೆಸಲಿದ್ದಾರೆ.

**<><*<><>*><>**

ಕೇರಳದ ವಯನಾಡು ಜಿಲ್ಲೆಯ ಮುಂಡಕ್ಕೈ ಮತ್ತು ಚುರಲ್ಮಲ ಭೂಕುಸಿತ ಭೂಕುಸಿತ ಪ್ರದೇಶಗಳಲ್ಲಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ. ದುರಂತದಲ್ಲಿ ೩೦೦ಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಂಡಿದ್ದು, ಕನಿಷ್ಠ ೨೦೦ ಮಂದಿ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ. ೯೧ ಪರಿಹಾರ ಶಿಬಿರಗಳಲ್ಲಿ ಸುಮಾರು ೯ ಸಾವಿರಕ್ಕೂ ಹೆಚ್ಚು ನಿರಾಶ್ರಿತರಿಗೆ ವಸತಿ ಕಲ್ಪಿಸಲಾಗಿದೆ.  ಭಾರತೀಯ ಸೇನೆಯು ಭೂಕುಸಿತ ಉಂಟಾಗಿರುವ ಮುಂಡಕ್ಕೈ ಪ್ರದೇಶಕ್ಕೆ ಸಂಪರ್ಕಿಸುವ ನಿಟ್ಟಿನಲ್ಲಿ ಬೃಹತ್ ತಾತ್ಕಾಲಿಕ ಕಬ್ಬಿಣದ ಸೇತುವೆಯನ್ನು ನಿರ್ಮಿಸಿದೆ. ಈ ಸೇತುವೆಯ ಮೂಲಕ ನೆರೆ ಪೀಡಿತ ಗ್ರಾಮಗಳಿಗೆ ಪರಿಹಾರ ಸಾಮಗ್ರಿಗಳನ್ನು ಹೊತ್ತ ವಾಹನಗಳು ಸಂಚರಿಸುತ್ತಿವೆ.  ಭಾರತೀಯ ಸೇನೆ, ಕೇರಳ ಸರ್ಕಾರದ ವಿವಿಧ ಪಡೆಗಳು, ಸ್ವಯಂ ಸೇವಾ ಸಂಘಟನೆಗಳು, ನೆರೆ ರಾಜ್ಯದ ಅನೇಕ ಮಂದಿ, ಶೋಧ ಮತ್ತು ಪರಿಹಾರ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಲೋಕಸಭಾ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಇಂದು ವಯನಾಡು ಜಿಲ್ಲೆಯ ಮುಂಡಕ್ಕೈ ಮತ್ತು ಪುಟ್ಟಿಮಡಂನ ಭೂಕುಸಿತ ಪ್ರದೇಶಗಳಿಗೆ ಭೇಟಿ ನೀಡಿದರು. ಇದೇ ವೇಳೆ ಕಾಂಗ್ರೆಸ್ ಪಕ್ಷದಿಂದ ಸಂತ್ರಸ್ತರಿಗೆ ನೂರು ಮನೆಗಳನ್ನು ನಿರ್ಮಿಸಿಕೊಡುವುದಾಗಿ ಭರವಸೆ ನೀಡಿದರು. ಅಲ್ಲದೆ, ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ, ವಯನಾಡು ಜಿಲ್ಲೆಯ ಪರಿಹಾರ ಶಿಬಿರಗಳಿಗೆ ಭೇಟಿ ನೀಡಿ, ಸಂತ್ರಸ್ತರ ಯೋಗಕ್ಷೇಮ ವಿಚಾರಿಸಿದರು.

**<><*<><>*><>**

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ಸಂಬಂಧ ಸುಪ್ರೀಂ ಕೋರ್ಟ್ ಹಲವು ಮಾರ್ಗಸೂಚಿಗಳನ್ನು ನೀಡಿದ್ದು, ಪರೀಕ್ಷೆ ವ್ಯವಸ್ಥೆಯಲ್ಲಿನ ಲೋಪ-ದೋಷಗಳನ್ನು ಆಮೂಲಾಗ್ರವಾಗಿ ಸರಿಪಡಿಸುವಂತೆ ತಜ್ಞರ ಸಮಿತಿಗೆ ಸೂಚಿಸಿದೆ. ಪ್ರಶ್ನೆಪತ್ರಿಕೆ ಮುದ್ರಣದಿಂದ ಆರಂಭಿಸಿ, ಪರೀಕ್ಷಾ ಕೇಂದ್ರಗಳಿಗೆ ತಲುಪುವ ವರೆಗೆ ಎಲ್ಲ ಎಚ್ಚರಿಕೆ ಕ್ರಮಗಳನ್ನು ವಹಿಸಬೇಕು. ಅಗತ್ಯವಿರುವೆಡೆ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು ಎಂದು ನ್ಯಾಯಾಲಯ ಸೂಚಿಸಿದೆ. ಪರೀಕ್ಷೆಗೆ ಸಂಬಂಧಿಸಿದ ಎಲ್ಲ ಗೊಂದಲಗಳನ್ನು ಈ ವರ್ಷವೇ ಬಗೆಹರಿಸಬೇಕು. ಇದು ಮುಂದಿನ ವರ್ಷಕ್ಕೆ ಮುಂದುವರಿಯಬಾರದು ಎಂದು ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ತ್ರಿಸದಸ್ಯ ಪೀಠ ಕೇಂದ್ರಕ್ಕೆ ಸೂಚಿಸಿದೆ.

**<><*<><>*><>**

ಈ ವರ್ಷ ಜೂನ್ ೩೦ ರವರೆಗೆ ದೇಶದಲ್ಲಿ ಆಯುಷ್ಮಾನ್ ಭಾರತ್-ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಅಡಿಯಲ್ಲಿ ೩೪ ಕೋಟಿಗೂ ಹೆಚ್ಚು ಆಯುಷ್ಮಾನ್ ಕಾರ್ಡ್‌ಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವ ಪ್ರತಾಪ್ ರಾವ್ ಜಾಧವ್, ದೆಹಲಿ, ಪಶ್ಚಿಮ ಬಂಗಾಳ, ಒಡಿಶಾ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶವನ್ನು ಹೊರತುಪಡಿಸಿ, ಉಳಿದ

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಹೇಳಿದ್ದಾರೆ. ಯೋಜನೆಯಡಿ ಒಂದು ಲಕ್ಷ ಕೋಟಿ ರೂಪಾಯಿ ಮೌಲ್ಯದ ಒಟ್ಟು ೭.೩೭ ಕೋಟಿ ಆಸ್ಪತ್ರೆ ದಾಖಲಾತಿಗಳನ್ನು ಅಧಿಕೃತಗೊಳಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಯೋಜನೆಯು ಫಲಾನುಭವಿಗಳ ಪ್ರತಿ ಕುಟುಂಬಕ್ಕೆ ವರ್ಷಕ್ಕೆ ಐದು ಲಕ್ಷ ರೂಪಾಯಿಗಳ ಆರೋಗ್ಯ ರಕ್ಷಣೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ.

<><*<><>*><>

ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ತಪ್ಪು ಮಾಹಿತಿ ಹರಡುವಿಕೆ ತಡೆಯಲು ರಾಷ್ಟ್ರಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್. ಮುರುಗನ್ ರಾಜ್ಯಸಭೆಯಲ್ಲಿಂದು ಹೇಳಿದ್ದಾರೆ. ಪ್ರಶ್ನೋತ್ತರ ಅವಧಿಯಲ್ಲಿ ಅವರು, ಸಾಮಾಜಿಕ ಜಾಲತಾಣಗಳಲ್ಲಿ ತಪ್ಪು ಮಾಹಿತಿ ಹಾಗೂ ಸುಳ್ಳು ವಿಷಯಗಳ ಹರಡುವಿಕೆ ಅತಿದೊಡ್ಡ ಸಮಸ್ಯೆಯಾಗಿದ್ದು, ಜನರನ್ನು ತಪ್ಪು ದಾರಿಗೆ ಎಳೆಯಲಾಗುತ್ತಿದೆ. ಇದನ್ನು ನಿಯಂತ್ರಿಸಲು ೨೦೧೯ರಲ್ಲಿ ದೆಹಲಿಯಲ್ಲಿ ಸತ್ಯಶೋಧನಾ ಘಟಕ- ಫ್ಯಾಕ್ಟ್ ಚೆಕ್ ತಂಡವನ್ನು ಸ್ಥಾಪಿಸಲಾಗಿದೆ. ಈವರೆಗೆ ೪೭ ಸಾವಿರದ ೫೬೨ ಫ್ಯಾಕ್ಟ್ ಚೆಕ್ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಘಟಕ ಅತ್ಯಂತ ದಕ್ಷವಾಗಿದ್ದು, ಅತ್ಯಾಧುನಿಕ ತಂತ್ರಜ್ಞಾನ ಒಳಗೊಂಡಿದೆ. ಆದರೆ ಇದನ್ನು ಪ್ರಾದೇಶಿಕ ಮಟ್ಟದಲ್ಲಿ ಇನ್ನೂ ಸ್ಥಾಪಿಸಿಲ್ಲ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೇಶದಲ್ಲಿ ಅತ್ಯುತ್ತಮ ಗುಣಮಟ್ಟದ ಆರೋಗ್ಯ ವ್ಯವಸ್ಥೆ ಹಾಗೂ ಜಾಗತಿಕ ಶ್ರೇಣಿಯ ವೈದ್ಯಕೀಯ ವಿಜ್ಞಾನ ಸಂಸ್ಥೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ಲೋಕಸಭೆಯಲ್ಲಿಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಅವಧಿಯಲ್ಲಿ ಅವರು, ಅತ್ಯುತ್ತಮ ಗುಣಮಟ್ಟದ ಏಮ್ಸ್ ಆಸ್ಪತ್ರೆ ೧೯೫೦ರ ದಶಕದಲ್ಲಿ ದೆಹಲಿಯಲ್ಲಿ ಆರಂಭಗೊಂಡಿದ್ದು, ಅದನ್ನು ೧೯೭೦ರಲ್ಲಿ ಅಂಗೀಕರಿಸಲಾಯಿತು. ಆದರೆ, ಇದೀಗ ದೇಶದ ವಿವಿಧ ಭಾಗಗಳಲ್ಲಿ ೧೭ಕ್ಕೂ ಹೆಚ್ಚು ಏಮ್ಸ್ ಆಸ್ಪತ್ರೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಹಿಂದೆ ದೇಶದಲ್ಲಿ ಅತ್ಯುತ್ತಮ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಿಲ್ಲ ಎಂದು ಪ್ರತಿಭಾನ್ವಿತ ವೈದ್ಯರು ವಿವಿಧ ದೇಶಗಳಿಗೆ ತೆರಳುತ್ತಿದ್ದರು. ಆದರೆ ಈಗ ಜಾಗತಿಕ ಗುಣಮಟ್ಟದ ೨೨ ಸಂಸ್ಥೆಗಳನ್ನು ದೇಶದಲ್ಲಿ ಸ್ಥಾಪಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಭಾರತ ಮತ್ತು ಶ್ರೀಲಂಕಾ ನಡುವಿನ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ಇಂದು ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯುತ್ತಿದೆ. ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೨೩೦ ರನ್‌ಗಳನ್ನು ಮಾಡಿದೆ. ಈ ಮೂಲಕ ಭಾರತಕ್ಕೆ ೨೩೧ ರನ್‌ಗಳ ಗುರಿ ನೀಡಿದೆ. ಈ ಗುರಿಯನ್ನು ಬೆನ್ನತ್ತಿರುವ ಭಾರತ, ೧೫ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೮೬ ರನ್ ಗಳಿಸಿದೆ.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ, ಬಿಲ್ಲುಗಾರಿಕೆ ಮಿಶ್ರ ವಿಭಾಗದ ೧೬ನೇ ಸುತ್ತಿನ ಪಂದ್ಯದಲ್ಲಿಂದು ಭಾರತದ ಜೋಡಿಯಾದ ಧೀರಜ್ ಬೊಮ್ಮದೇವರ ಮತ್ತು ಅಂಕಿತಾ ಭಕತ್, ಇಂಡೋನೇಷ್ಯಾದ ದಯಾನಂದ ಚೊಯಿರುನಿಸಾ ಮತ್ತು ಆರಿಫ್ ಪಂಗೆಸ್ತು ಜೋಡಿ ವಿರುದ್ಧ ೫-೧ ಅಂತರದಿಂದ ಜಯ ಗಳಿಸಿದ್ದು, ಕ್ವಾರ್ಟರ್ ಫೈನಲ್ಸ್‌ಗೆ ಪ್ರವೇಶ ಪಡೆದಿದ್ದಾರೆ. ಮತ್ತೊಂದೆಡೆ, ಈ ಒಲಿಂಪಿಕ್ಸ್‌ನಲ್ಲಿ ಎರಡು ಬಾರಿ ಕಂಚಿನ ಪದಕ ವಿಜೇತೆ ಮನು ಭಾಕರ್, ಮಹಿಳೆಯರ ೨೫ ಮೀಟರ್ ಶೂಟಿಂಗ್ ಅರ್ಹತಾ ಸುತ್ತಿನಲ್ಲಿ ೫೯೦ ಅಂಕಗಳೊಂದಿಗೆ ಎರಡನೇ ಸ್ಥಾನ ಪಡೆದಿದ್ದು, ಈ ಮೂಲಕ ಅಂತಿಮ ಸುತ್ತು ಪ್ರವೇಶಿಸಿದ್ದಾರೆ. ನಾಳೆ ನಡೆಯಲಿರುವ ಅಂತಿಮ ಸುತ್ತಿನಲ್ಲಿ ಭಾರತಕ್ಕೆ ಮತ್ತೊಂದು ಪದಕದ ನಿರೀಕ್ಷೆಯಿದೆ. ಇದೇ ಸ್ಪರ್ಧೆಯಲ್ಲಿ ಭಾರತದ ಈಶಾ

ಸಿಂಗ್ ೫೮೧ ಅಂಕಗಳೊಂದಿಗೆ ೧೮ ಸ್ಥಾನಕ್ಕೆ ತೃಪ್ತರಾದರು. ಪುರುಷರ ಹಾಕಿಯಲ್ಲಿ ಈಗಾಗಲೇ ಕ್ವಾರ್ಟರ್‌ಫೈನಲ್‌ಗೆ ಅರ್ಹತೆ ಪಡೆದಿರುವ ಭಾರತ, ಇಂದು ನಡೆದ ಪೂಲ್ ಬಿ ಪಂದ್ಯದಲ್ಲಿ ಆಸ್ಟ್ರೇಲಿಯ ವಿರುದ್ಧ ೩-೨ ಗೋಲುಗಳೊಂದಿಗೆ ಜಯ ಸಾಧಿಸಿದೆ. ಜೂಡೋದಲ್ಲಿ ಮಹಿಳೆಯರ ಪ್ಲಸ್ ೭೮ ಕೆಜಿಯ ೩೨ನೇ ಸುತ್ತಿನ ಪಂದ್ಯದಲ್ಲಿ ಭಾರತದ ತುಲಿಕಾ ಮಾನ್ ಕ್ಯೂಬಾದ ಇಡಾಲಿಸ್ ಒರ್ಟಿಜ್ ವಿರುದ್ಧ ಪರಾಭವಗೊಂಡಿದ್ದಾರೆ. ಭಾರತದ ಲಕ್ಷ್ಯ ಸೇನ್ ಇಂದು ಪುರುಷರ ಸಿಂಗಲ್ಸ್ ಬ್ಯಾಡ್ಮಿಂಟನ್‌ನ ಕ್ವಾರ್ಟರ್-ಫೈನಲ್ ಪಂದ್ಯದಲ್ಲಿ ಚೈನೀಸ್ ತೈಪೆಯ ಚೌ ಟಿಯೆನ್ ಚೆನ್ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೦೫ಕ್ಕೆ ಆರಂಭವಾಗಲಿದೆ. ಲಕ್ಷ್ಯ ಸೇನ್ ಪ್ರಸ್ತುತ ಒಲಿಂಪಿಕ್ಸ್‌ನಲ್ಲಿ ಉಳಿದಿರುವ ಏಕೈಕ ಭಾರತೀಯ ಬ್ಯಾಡ್ಮಿಂಟನ್ ಆಟಗಾರರಾಗಿದ್ದಾರೆ.

**<><*<><>*><>**

ಮುಂದಿನ ೨ ದಿನಗಳಲ್ಲಿ ವಾಯುವ್ಯ ಭಾರತ ಮತ್ತು ಮುಂದಿನ ೩ ರಿಂದ ೪ ದಿನಗಳಲ್ಲಿ ಮಧ್ಯ ಭಾರತದಾದ್ಯಂತ ಮುಂಗಾರು ಸಕ್ರಿಯವಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.  ನಾಳೆಯವರೆಗೆ ಮಹಾರಾಷ್ಟ್ರ, ಮಧ್ಯಪ್ರದೇಶ, ಗೋವಾ ಮತ್ತು ಗುಜರಾತ್‌ನ ಕೆಲವು ಭಾಗಗಳಲ್ಲಿ ಭಾರೀ ಮಳೆಯಾಗಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ **<>*><>**